# ಸ್ವಚ್ಛ ಪರಿಸರ ಕಾಪಾಡುವದು ಆದ್ಯ ಕರ್ತವ್ಯ



**ಹಳಿಯಾಳ:** ಪರಿಸರ ಉಳಿದರೆ ಮಾತ್ರ ಮಾನವ ಬದುಕು ಅರಳಲು ಸಾಧ್ಯ. ಪರಿಸರ ಸುಚಿಗೊಳಿಸುವದು ಹಾಗೂ ನೈರ್ಮಲ್ಯ ಆಗದಂತೆ ತಡೆಯುವದು ನಮ್ಮೆಲ್ಲರ ಹೊಣೆಯಾಗಿದೆ ಎಂದು ಪ್ರಾಚಾರ್ಯ ಡಾ. ವಿ.ಎ.ಕುಲಕರ್ಣಿ ಹೇಳಿದರು.

ಇಲ್ಲಿನ ಕೆಎಲ್ಎಸ್ ಸಂಸ್ಥೆಯ ವಿಶ್ವನಾಥರಾವ ದೇಶಪಾಂಡೆ ತಾಂತ್ರಿಕ ಮಹಾ ವಿದ್ಯಾಲಯದ ಎನ್ ಎಸ್ ಎಸ್ ಘಟಕದ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಸೇರಿ ದೇಗುಲ ಆವರಣವನ್ನು

ಸ್ವಚ್ಛಗೊಳಿಸುವ ಕಾರ್ಯಕ್ರಮಕ್ಕೆ ಶನಿವಾರ ಚಾಲನೆ ನೀಡಿ ಅವರು ಮಾತನಾಡಿ, ಪಟ್ಟಣದ ಕಿಲ್ಲಾದಲ್ಲಿರುವ ಮಲ್ಲಿಕಾರ್ಜುನ ದೇವಸ್ಥಾನದ ಆವರಣವನ್ನು ಸ್ವಚ್ಛ ಗೊಳಿಸಿ ಪ್ಲಾಸ್ಟಿಕ್ ಮುಕ್ತವನ್ನಾಗಿಸಲಾಗಿದೆ ಎಂದರು.

.ಪಟ್ಟಣದ ಪ್ರವಾಸಿ ತಾಣವಾಗಿರುವ ಶತಮಾನದ ಇತಿಹಾಸ ಹೊಂದಿರುವ ಮಲ್ಲಿಕಾರ್ಜುನ ದೇವಾಲಯ ಸುತ್ತಮುತ್ತ ಪ್ಲಾಸ್ಟಿಕ್ ನಿಂದ ಮಲಿನಗೊಂಡಿದ್ದನ್ನು ಮನಗಂಡ ಮಹಾವಿದ್ಯಾಲಯದ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಆವರಣವನ್ನು ಸ್ವಚ್ಛಗೊಳಿಸಿ ಕಸವನ್ನು ಸುವ್ಯವಸ್ಥಿತವಾಗಿ ವಿಲೇವಾರಿ ಮಾಡಿದರು ಎಂದು ಎನ್ ಎನ್ ಎಸ್ ಕಾರ್ಯಕ್ರಮಾಧಿಕಾರಿ ಪ್ರೊ. ಸಂತೋಷ್ ಸವಣೂರ್ ಹೇಳಿದರು.

ಎನ್ಎಸ್ಎಸ್ ಅಧಿಕಾರಿಗಳಾದ ಡಾ. ಅನಂತ ಜೋಶಿ ಮತ್ತು ಡಾ. ಶಂಕರ್ ಬಡಿಗೇರ್ ಕಾರ್ಯಕ್ರಮ ಸಂಯೋಜಿಸಿದ್ದರು.

ಹೊಸ ದಿಗಂತ

# ವಿಡಿಐಟಿಯಿಂದ ದೇಗುಲ ಆವರಣ ಸ್ವಚ್ಛ

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಹಳಿಯಾಳದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ದೇಗುಲ ಆವರಣವನ್ನು ಸ್ವಚ್ಛಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಪಟ್ಟಣದ ಕಿಲ್ಲಾದಲ್ಲಿರುವ ಮಲ್ಲಿಕಾರ್ಜುನ ದೇವಸ್ಥಾನದ ಆವರಣವನ್ನು ಸ್ವಚ್ಛಗೊಳಿಸಿ ಪ್ಲಾಸ್ಟಿಕ್ ಮುಕ್ತವಾಗಿಸಿದರು. ಹಳಿಯಾಳ ಪಟ್ಟಣದ ಪ್ರವಾಸಿ ತಾಣವಾಗಿರುವ ಶತಮಾನದ ಇತಿಹಾಸ ಹೊಂದಿರುವ ಮಲ್ಲಿಕಾರ್ಜುನ ದೇವಾಲಯ ಸುತ್ತಮುತ್ತ ಪ್ಲಾಸ್ಟಿಕ್‌ನಿಂದ ಮಲಿನಗೊಂಡಿದ್ದನ್ನು ಮನಗಂಡ ಮಹಾವಿದ್ಯಾಲಯದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಆವರಣವನ್ನು ಸ್ವಚ್ಛಗೊಳಿಸಿ ಕಸವನ್ನು ಸುವ್ಯವಸ್ಥಿತವಾಗಿ ವಿಲೇವಾರಿ ಮಾಡಿದರು. ಮಹಾವಿದ್ಯಾಲಯದ ಎನ್ಎಸ್ಎಸ್ ಘಟಕವು ಈ ಕಾರ್ಯಕ್ರಮವನ್ನು ಆಯೋಜಿಸಿತ್ತು. ಎನ್ಎನ್ಎಸ್ ಅಧಿಕಾರಿ ಪ್ರೊ. ಸಂತೋಷ್ ಸವಣೂರ್, ಡಾ. ಅನಂತ ಜೋಶಿ ಮತ್ತು ಡಾ. ಶಂಕರ್ ಬಡಿಗೇರ್ ಸಂಯೋಜಿಸಿದ್ದರು. ಸ್ವಚ್ಛ ಪರಿಸರ ಹಾಗೂ ನೈರ್ಮಲ್ಯ ನಮ್ಮೆಲ್ಲರ ಹೊಣೆಯಾಗಿರುವುದರಿಂದ ಮಹಾವಿದ್ಯಾಲಯವು ಈ ಕಾರ್ಯಕ್ರಮವನ್ನು ಆಯೋಜಿಸಿತ್ತು ಎಂದು ಪ್ರಾಚಾರ್ಯ ಡಾ. ವಿ.ಎ .ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೊಸ ದಿಗಂತ

# ವಿಡಿಐಟಿಯಿಂದ ದೇಗುಲ ಆವರಣ ಸ್ವಚ್ಛ

**ಹಳಿಯಾಳ:** ಕೆಎಲ್‌ಎಸ್ ವಿಡಿಐಟಿ ಹಳಿಯಾಳದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ದೇಗುಲ ಆವರಣವನ್ನು ಸ್ವಚ್ಛಗೊಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಪಟ್ಟಣದ ಕಿಲ್ಲಾದಲ್ಲಿರುವ ಮಲ್ಲಿಕಾರ್ಜುನ ದೇವಸ್ಥಾನದ ಆವರಣವನ್ನು ಸ್ವಚ್ಛ ಗೊಳಿಸಿ ಪ್ಲಾಸ್ಟಿಕ್ ಮುಕ್ತವಾಗಿಸಿದರು. ಹಳಿಯಾಳ ಪಟ್ಟಣದ ಪ್ರವಾಸಿ ತಾಣವಾಗಿರುವ ಶತಮಾನದ ಇತಿಹಾಸ ಹೊಂದಿರುವ ಮಲ್ಲಿಕಾರ್ಜುನ ದೇವಾಲಯ ಸುತ್ತಮುತ್ತ ಪ್ಲಾಸ್ಟಿಕ್ ನಿಂದ ಮಲಿನಗೊಂಡಿದ್ದನ್ನು ಮನಗಂಡ ಮಹಾವಿದ್ಯಾಲಯದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಆವರಣವನ್ನು ಸ್ವಚ್ಛ ಗೊಳಿಸಿ ಕಸವನ್ನು ಸುವ್ಯವಸ್ಥಿತವಾಗಿ ವಿಲೇವಾರಿ ಮಾಡಿದರು. ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕವು ಈ ಕಾರ್ಯಕ್ರಮವನ್ನು ಆಯೋಜಿಸಿತ್ತು. ಎನ್‌ಎಸ್‌ಎಸ್ ಅಧಿಕಾರಿ ಪ್ರೊ. ಸಂತೋಷ್ ಸವಣೂರ್, ಡಾ. ಅನಂತ ಜೋಶಿ ಮತ್ತು ಡಾ. ಶಂಕರ್ ಬಡಿಗೇರ್ ಸಂಯೋಜಿಸಿದ್ದರು. ಸ್ವಚ್ಛ ಪರಿಸರ ಹಾಗೂ ನೈರ್ಮಲ್ಯ ನಮ್ಮೆಲ್ಲರ ಹೊಣೆಯಾಗಿರುವುದರಿಂದ ಮಹಾವಿದ್ಯಾಲಯವು ಈ ಕಾರ್ಯಕ್ರಮವನ್ನು ಆಯೋಜಿಸಿತ್ತು ಎಂದು ಪ್ರಾಚಾರ್ಯ ಡಾ. ವಿ.ಎ .ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.